# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 496(531)

ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 14.08.2025

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಉದ್ಯೋಗಗಳಲ್ಲಿ ಅಂಗವಿಕಲರಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ; | ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಅಂಗವೈಕಲ್ಯವನ್ನುಳ್ಳ ವ್ಯಕ್ತಿಗಳಿಗೆ ಗ್ರೂಪ್ ಎ ಮತ್ತು ಬಿ ವೃಂದಗಳ ಹುದ್ದೆಗಳಲ್ಲಿ ಶೇ.4 ರಷ್ಟು ಹಾಗೂ ಗ್ರೂಪ್ ಸಿ ಮತ್ತು ಡಿ ವೃಂದಗಳ ಹುದ್ದೆಗಳಲ್ಲಿ ಶೇ.5ರಷ್ಟು ಸಮತಲ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ.<br>ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಸಂಬಂದಿಸಿದಂತೆ ನೇಮಕಾತಿ ವಿಧಾನವನ್ನು ಆಯಾಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಲಾಗಿರುತ್ತದೆ.<br>ಲಿಫ್ಟ್ ನಿರ್ವಾಹಕ ಹುದ್ದೆಯು ಗ್ರೂಪ್-ಡಿ ಹುದ್ದೆಯಾಗಿದ್ದು, ಪ್ರಸ್ತುತದಲ್ಲಿ ಈ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವುದು ಸರ್ಕಾರದ ಇತ್ತೀಚಿನ ಅಂಗೀಕೃತ ಕಾರ್ಯ ನೀತಿಯಾಗಿರುತ್ತದೆ. |
| (ಆ) | ಸರ್ಕಾರಿ ಬಹುಮಹಡಿ ಕಟ್ಟಡಗಳಲ್ಲಿ ಲಿಫ್ಟ್ ನಿರ್ವಾಹಕ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಇರುವ ನಿಯಮಗಳೇನು; | |
| (ಇ) | ನೇಮಕಾತಿ ಮಾಡುವ ಸಂದರ್ಭದಲ್ಲಿ ಅಂಗವಿಕಲರಿಗೆ ಎಷ್ಟು ಶೇಕಡಾವಾರು ಮೀಸಲಾತಿ ನೀಡಲಾಗುತ್ತಿದೆ; (ವಿವರ ನೀಡುವುದು); | |
| (ಈ) | ಸರ್ಕಾರಿ ಮತ್ತು ಖಾಸಗಿ ಕಟ್ಟಡಗಳಲ್ಲಿಯ ಲಿಫ್ಟ್ ಗಳಲ್ಲಿ ಲಿಫ್ಟ್ ನಿರ್ವಾಹಕ ಹುದ್ದೆಗಳನ್ನು ಕಡ್ಡಾಯವಾಗಿ ಅಂಗವಿಕಲರಿಗೆ ಮೀಸಲಿರಿಸುವ ಕುರಿತು ಸರ್ಕಾರದ ನಿಲುವೇನು? | ಅಂಗವೈಕಲ್ಯವನ್ನುಳ್ಳ ವ್ಯಕ್ತಿಗಳಿಗೆ ಕಲ್ಪಿಸಿರುವ ಮೀಸಲಾತಿಯು "Government establishment" ಗಳಿಗೆ ಮಾತ್ರ ಅನ್ವಯವಾಗುತ್ತದೆ. |
| (ಉ) | ಲಿಫ್ಟ್ ನಿರ್ವಾಹಕ ಹುದ್ದೆಗಳನ್ನು ಸಂಪೂರ್ಣವಾಗಿ ಅಂಗವಿಕಲರಿಗೆ ಮೀಸಲಿಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? | ಇಲ್ಲ |

**ಸಂಖ್ಯೆ:ಸಿಆಸುಇ 223 ಸೆನೆನಿ 2025**

**(ಸಿದ್ದರಾಮಯ್ಯ)**

ಮುಖ್ಯಮಂತ್ರಿ